**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ ಚನ್ನಪಟ್ಟಣ.**

**ಸಿ.ಸಿ. ಸಂಖ್ಯೆ:339/2024**

ಚಾಸಾಃ 2 ಪ್ರಾಸಾಃ2

| | | |
|---|---|---|
| ಹೆಸರು | : | ದೇವರಾಜು |
| ಗಂಡನ/ತಂದೆಯ ಹೆಸರು | : | ತಿಮ್ಮೇಗೌಡ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಮಾಕಳಿ . |

**ದಿನಾಂಕ 13.03.2026 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿ ಯವರಿಂದ:**

ಪೋಲಿಸರು ನನ್ನ ಸಮಕ್ಷಮ ಮಹಜರ್ ಮಾಡಿರುವುದಿಲ್ಲ. ಮಹಜರ್ ಅನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ನನ್ನ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಯಾವುದೇ ಮದ್ಯವನ್ನು ಜಪ್ತು ಮಾಡಿಕೊಂಡಿಲ್ಲ. ಪೋಲಿಸರು ನಾನು ಹೇಳಿಕೆ ನೀಡಿಲ್ಲ. ಮದ್ಯದ ಪೌಚ್ ಅನ್ನು ಹೊಂದಿರುವ ಬಿಳಿ ಬ್ಯಾಗ್ ಮೇಲೆ ಅಂಟಿಸಿರುವ ಚೀಟಿಯ ಮೇಲೆ ಇರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಮು ಮಾ 1(ಬಿ) ಎಂದು ಗುರುತಿಸಲಾಯಿತು

**(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿರುತ್ತಾರೆ ಅನುಮತಿಸಲಾಯಿತು).**

**ಪಾಟೀ ಸವಾಲುಃ ಎಪಿಪಿಯವರಿಂದಃ**

ದಿನಾಂಕ 29.08.2023 ರಂದು ಚಾಸಾ1 ರವರು ನನ್ನನ್ನು ಬರಮಾಡಿಕೊಂಡು ಮಾಕಳಿ ಗ್ರಾಮದಲ್ಲಿ ಭಾಗ್ಯಮ್ಮ ಎನ್ನುವರು ಅಕ್ರಮವಾಗಿ ಮದ್ಯದ ದಾಸ್ತಾನುವನ್ನು ಮಾರಾಟ ಮಾಡುತ್ತಿದ್ದಾರೆಂದು ತಿಳಿಸಿ ನಾವು ದಾಳಿ ಮಾಡುವ ಸಮಯದಲ್ಲಿ ನೀವು ಪಂಚರಾಗಿ ಸಹಕರಿಸಬೇಕೆಂದು ಕೋರಿಕೊಂಡ ಮೇರೆಗೆ ನಾನು ಚಾಸಾ1 ರವರ ಜೊತೆ ಹೋಗಿರುತ್ತೇನೆಂದರೆ ಸರಿಯಲ್ಲ. ಸಂಜೆ

7.00-8.30 ಗಂಟೆಯ ಸಮಯದಲ್ಲಿ ಚಾಸಾ1 ರವರು, ಚಾಸಾ4 ರಿಂದ 6 ರವರು ಮಹಜರ್ ಕ್ರಮವನ್ನು ಜರುಗಿಸಿ ಚಾಸಾ3 ರವರು ಸಹ ಹಾಜರಿರುತ್ತಾರೆಂದರೆ ನನಗೆ ಗೊತ್ತಿಲ್ಲ. ಅದೇ ದಿನ ಚಾಸಾ1 ರವರು

1.Haywards cheers whisky 90 ಎಂ ಎಲ್ ನ 190 ಪೌಚ್ ಗಳು

2. Bag piper whisky 180 ಎಂ ಎಲ್ ನ 40 ಪೌಚ್ ಗಳು ಒಟ್ಟು 24.300 ಲೀಟರ್ ಭಾರತೀಯ ತಯಾರಿಕಾ ಮದ್ಯವನ್ನು ಅಕ್ರಮವಾಗಿ ಹೊಂದಿರುವುದು ಕಂಡು ಬಂದಿದ್ದು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ.

ದಿಃ11.12.2023 ರಂದು ತನಿಖಾಧಿಕಾರಿಯವರ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಗೆ ಓದಿ ಹೇಳಲಾಗಿ ಸಾಕ್ಷಿ ಒಪ್ಪಿ ಕೊಳ್ಳದ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು. ಚಾಸಾ1 ರವರು ಪ್ರತ್ಯೇಕವಾಗಿ ತೆಗೆದ ಮದ್ಯಗಳನ್ನು ಬಿಳಿ ಬಟ್ಟೆಯಲ್ಲಿ ಕಟ್ಟಿ ಅರಗು ಹಾಕಿ ನನ್ನ ಸಹಿಯನ್ನು ಪಡೆದಿರುತ್ತಾರೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಆರೋಪಿ ಪರ ವಕೀಲರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ನುಡಿಯುತ್ತಾರೆ

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

**(ವೆಂಕಟೇಶಪ್ಪ. ವಿ)**
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**